ಉದಯವಾಣಿ
ಸುದಿನ

ಮಣಿಪಾಲ
2022
ಅಕ್ಟೋಬರ್ 30 | ರವಿವಾರ

ಮಣಿಪಾಲ ಕೆಎಂಸಿ

# ಪಾರ್ಶ್ವವಾಯು ಜಾಗೃತಿಗೆ ಮರಳು ಕಲಾ ಶಿಲ್ಪ

ಉಡುಪಿ, ಅ. 29: ಮಣಿಪಾಲ ಕಸ್ತೂರ್ಬಾ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ನರವಿಜ್ಞಾನ ವಿಭಾಗದ ವತಿಯಿಂದ ಅ. 29ರ ವಿಶ್ವ ಪಾರ್ಶ್ವವಾಯು ದಿನಾಚರಣೆ ಪ್ರಯುಕ್ತ ಮಲ್ಪೆ ಕಡಲ ತೀರದಲ್ಲಿ ಪಾರ್ಶ್ವವಾಯು ಆರೋಗ್ಯದ ಕುರಿತು ಜಾಗೃತಿ ಮೂಡಿಸುವ ಮರಳು ಕಲಾ ಶಿಲ್ಪವನ್ನು ಶನಿವಾರ ಅನಾವರಣ ಗೊಳಿಸಲಾಯಿತು.

ಅನಾವರಣಗೊಳಿಸಿದ ಕೆಎಂಸಿ ಮಣಿಪಾಲದ ಡೀನ್ ಡಾ| ಶರತ್ ಕೆ. ರಾವ್ ಮಾತನಾಡಿ, ಪಾರ್ಶ್ವವಾಯು ಅಂದರೆ ಮೆದುಳಿನ ರಕ್ತನಾಳದಲ್ಲಿ ರಕ್ತ ಹೆಪ್ಪುಗಟ್ಟಿ ಆ ಭಾಗವು ನಿಷ್ಕ್ರಿಯಗೊಳ್ಳುತ್ತದೆ. ಇದರಿಂದ ಶೇ. 33ರಷ್ಟು ಜನ ಸಾವನ್ನಪ್ಪುತ್ತಾರೆ. ಇನ್ನೂ ಶೇ. 33ರಷ್ಟು ಜನ ಶಾಶ್ವತ ಅಂಗ ನ್ಯೂನತೆ ಹೊಂದುತ್ತಾರೆ. ಇದನ್ನು ನಿಯಂತ್ರಿಸಲು ಸಮತೋಲನ ಆಹಾರ ಹಾಗೂ ವ್ಯಾಯಾಮ ಅವಶ್ಯ. ರೋಗ ಲಕ್ಷಣಗಳು ಕಂಡ 4.5 ಗಂಟೆಗಳೊಳಗೆ ಆಸ್ಪತ್ರೆಗೆ ಬಂದರೆ ಸಂಪೂರ್ಣ ಗುಣಮುಖರಾಗುವ ಸಾಧ್ಯತೆ ಹೆಚ್ಚಿದೆ ಎಂದು ತಿಳಿಸಿದರು.

ಪಾರ್ಶ್ವವಾಯು ಆರೋಗ್ಯ ಮತ್ತು ಪಾರ್ಶ್ವವಾಯು ದಿನದ ಕುರಿತು ನರ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ| ಗಿರೀಶ್ ಮೆನನ್ ಆರ್. ಮಾಹಿತಿ ನೀಡಿದರು.

ಮಾಹೆ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ| ಆನಂದ್ ವೇಣುಗೋಪಾಲ್, ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ್ ಶೆಟ್ಟಿ, ಸಿಬಂದಿ ಉಪಸ್ಥಿತರಿದ್ದರು.

ನರವಿಜ್ಞಾನ ವಿಭಾಗದ ಮುಖ್ಯಸ್ಥೆ ಡಾ| ಅಪರ್ಣಾ ಆರ್. ಪೈ ಸ್ವಾಗತಿಸಿ, ಡಾ| ಶ್ರೀಪದ್ಮ ವಿ. ನಿರೂಪಿಸಿದರು.



ಮಲ್ಪೆ ಕಡಲ ತೀರದಲ್ಲಿ ಪಾರ್ಶ್ವವಾಯು ಆರೋಗ್ಯದ ಕುರಿತು ಮರಳು ಕಲಾ ಶಿಲ್ಪವನ್ನು ಅನಾವರಣಗೊಳಿಸಲಾಯಿತು.

THE HINDU

Sunday, October 30, 2022
MANGALURU

# Stroke health awareness sand art sculpture unveiled in Malpe



Kasturba Hospital, Manipal, observed World Stroke Day by unveiling a sand art sculpture on stroke health awareness on Malpe beach in Udupi on Saturday. SPECIAL ARRANGEMENT

**The Hindu Bureau**
MANGALURU

To mark World Stroke Day, Kasturba Hospital, Manipal, unveiled a 'Stroke Health Awareness' sand art sculpture on Malpe beach on Saturday, October 29.

Speaking on the occasion, Dean of KMC Manipal, Sharath K. Rao, said stroke occurs when blood clots in the brain and this results in that particular part becoming inoperative. Nearly 33% of people die, while another 33% suffer permanent disability. A balanced diet and exercise play an important role in controlling this.

Dr. Rao said if a person with symptoms of stroke is brought to the hospital within 4.5 hours then there is good chance of complete recovery. At the KMC Hospital, Ambedkar Circle, Mangaluru, a stroke awareness talk for first responders namely the city bus drivers, conductors and autorickshaw drivers was held.

This awareness programme was inaugurated by Vice President of of MACO Cooperative Society Shekar Deralakatte and the president of Dakshina Kannada Bus Owners' Association Jayasheela Adyanthaya.

To educate people about strokes, a QR link will be placed in 5,000 autorickshaws and 500 city buses. By scanning this QR code, people can watch an informative video about strokes, which was digitally released on Saturday.

ಪ್ರಜಾವಾಣಿ
ಭಾನುವಾರ • ಅಕ್ಟೋಬರ್ 30, 2022

# ಪಾರ್ಶ್ವವಾಯು ಜಾಗೃತಿಗೆ ಮರಳು ಶಿಲ್ಪ

ಪ್ರಜಾವಾಣಿ ವಾರ್ತೆ

ಉಡುಪಿ: ಮಣಿಪಾಲದ ಕಸ್ತೂರಬಾ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಆಸ್ಪತ್ರೆ ವತಿಯಿಂದ ವಿಶ್ವ ಪಾರ್ಶ್ವವಾಯು ದಿನದ ಅಂಗವಾಗಿ ಶನಿವಾರ ಮಲ್ಪೆ ಬೀಚ್‌ನಲ್ಲಿ ಪಾರ್ಶ್ವವಾಯು ರೋಗದ ಕುರಿತು· ಜಾಗೃತಿ ಮೂಡಿಸಲು ಮರಳು ಶಿಲ್ಪ ರಚಿಸಲಾಗಿತ್ತು.

ಮರಳು ಕಲಾ ಶಿಲ್ಪವನ್ನು ಅನಾವರಣಗೊಳಿಸಿ ಕೆಎಂಸಿ ಡೀನ್ ಡಾ.ಶರತ್ ಕೆ.ರಾವ್ ಮಾತನಾಡಿ, 'ಮಿದುಳಿನ ರಕ್ತನಾಳದಲ್ಲಿ ರಕ್ತ ಹೆಪ್ಪುಗಟ್ಟುವಿಕೆಯಿಂದ ಪಾರ್ಶ್ವವಾಯು ಸಂಭವಿಸಲಿದ್ದು ದೇಹದ ನಿರ್ಧಿಷ್ಟ ಭಾಗ ನಿಷ್ಕ್ರಿಯಗೊಳ್ಳುತ್ತದೆ.

ಪಾರ್ಶ್ವವಾಯುವಿನಿಂದ ಶೇ 33ರಷ್ಟು ಜನ ಸಾವನ್ನಪ್ಪುತ್ತಿದ್ದಾರೆ. ಶೇ 33ರಷ್ಟು ಜನ ಶಾಶ್ವತ ಅಂಗನ್ಯೂನತೆಗೆ ಒಳಗಾಗುತ್ತಿದ್ದಾರೆ. ಪಾರ್ಶ್ವವಾಯು ನಿಯಂತ್ರಿಸಲು ಸಮತೋಲನ ಆಹಾರ ಹಾಗೂ ವ್ಯಾಯಾಮ ಬಹಳ ಅವಶ್ಯ ಎಂದರು.

ಪಾರ್ಶ್ವವಾಯು ರೋಗಲಕ್ಷಣಗಳು ಕಾಣಿಸಿಕೊಂಡ 4 ರಿಂದ 5 ಗಂಟೆಗಳೊಳಗೆ ಆಸ್ಪತ್ರೆಗೆ ಬಂದು ಚಿಕಿತ್ಸೆ ಪಡೆದರೆ ರೋಗದಿಂದ ಸಂಪೂರ್ಣ ಗುಣಮುಖರಾಗುವ ಸಾಧ್ಯತೆಗಳು ಹೆಚ್ಚಾಗಿರುತ್ತವೆ ಎಂದು ಸಲಹೆ ನೀಡಿದರು.



ಶನಿವಾರ ಮಲ್ಪೆ ಬೀಚ್‌ನಲ್ಲಿ ಪಾರ್ಶ್ವವಾಯು ರೋಗದ ಕುರಿತು ಜಾಗೃತಿ ಮೂಡಿಸಲು ಮರಳು ಶಿಲ್ಪ ರಚಿಸಲಾಗಿತ್ತು

ಕಾರ್ಯಕ್ರಮದಲ್ಲಿ ಮಾಹೆ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ನರವಿಜ್ಞಾನ ವಿಭಾಗದ ಮುಖ್ಯಸ್ಥರಾದ ಡಾ.ಅಪರ್ಣಾ ಆರ್.ಪೈ, ನರಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಗಿರೀಶ್ ಮೆನನ್ ಸಿಬ್ಬಂದಿ ಉಪಸ್ಥಿತರಿದ್ದರು. ಡಾ ಶ್ರೀಪದ್ಮ ಕಾರ್ಯಕ್ರಮ ನಿರೂಪಿಸಿದರು.


ವಿಶ್ವದಾದ್ಯಂತ ಪಾರ್ಶ್ವವಾಯು ಸಂಭವ ಕಡಿಮೆ ಮಾಡಲು ಪ್ರತಿ ವರ್ಷ ಅ.29ರಂದು ವಿಶ್ವ ಪಾರ್ಶ್ವವಾಯು ದಿನ ಆಚರಿಸಲಾಗುತ್ತದೆ. ಪಾರ್ಶ್ವವಾಯು ಗಂಭೀರ ಸ್ವರೂಪಗಳು ಹಾಗೂ ಅಪಾಯಗಳು, ಚಿಕಿತ್ಸಾ ವಿಧಾನಗಳ ಕುರಿತು ಸಾರ್ವಜನಿಕರಲ್ಲಿಅರಿವ ಮೂಡಿಸಲಾಗುತ್ತಿದೆ ಎಂದು ವೈದ್ಯರು ತಿಳಿಸಿದರು.

**Samyuktha Karnataka**

# ಪಾರ್ಶ್ವವಾಯು ಜಾಗೃತಿ ಕಲಾಶಿಲ್ಪ

ಸಂ.ಕ.ಸಮಾಚಾರ,ಉಡುಪಿ

ಪಾರ್ಶ್ವವಾಯು ಸಂಭವ ಕಡಿಮೆ ಮಾಡಲು ಪ್ರತಿವರ್ಷ ಅ.29ರಂದು ವಿಶ್ವ ಪಾರ್ಶ್ವವಾಯು ದಿನ ಆಚರಿಸಲಾಗುತ್ತಿದ್ದು, ಈ ರೋಗದ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಮಣಿಪಾಲ ಕೆಎಂಸಿ ಆಸ್ಪತ್ರೆ ನರವಿಜ್ಞಾನ ವಿಭಾಗ ಆಶ್ರಯದಲ್ಲಿ ಶನಿವಾರ ಮಲ್ಪೆ ಕಡಲ ತೀರದಲ್ಲಿ ಮರಳು ಶಿಲ್ಪ ರಚಿಸಲಾಯಿತು.




ಮಲ್ಪೆ ಕಡಲ ತೀರದಲ್ಲಿ ಪಾರ್ಶ್ವವಾಯು ಜಾಗೃತಿ ಮರಳು ಕಲಾಶಿಲ್ಪ ರಚನೆ.

ಮರಳು ಕಲಾ ಶಿಲ್ಪ ಉದ್ಘಾಟಿಸಿದ ಕೆಎಂಸಿ ಮಣಿಪಾಲ ಡೀನ್ ಡಾ.ಶರತ್ ಕೆ.ರಾವ್, ಪಾರ್ಶ್ವವಾಯುನಿಂದ ಮೆದುಳಿನ ರಕ್ತನಾಳದಲ್ಲಿ ರಕ್ತ ಹೆಪ್ಪುಗಟ್ಟಿ ಆ ಭಾಗ ನಿಷ್ಕ್ರಿಯಗೊಳ್ಳುತ್ತದೆ. ಅದರಿಂದ ಶೇ. 33ರಷ್ಟು ಜನ ಸಾವನ್ನಪ್ಪುತ್ತಾರೆ. ಇನ್ನೂ ಶೇ. 33ರಷ್ಟು ಜನ ಶಾಶ್ವತ ಅಂಗನ್ಯೂನತೆ ಹೊಂದುತ್ತಾರೆ. ಅದನ್ನು ನಿಯಂತ್ರಿಸಲು ಸಮತೋಲನ ಆಹಾರ ಹಾಗು ವ್ಯಾಯಾಮ ಅವಶ್ಯ. ರೋಗ ಲಕ್ಷಣ ಕಂಡ 4– 5 ಗಂಟೆಗಳೊಳಗೆ ಆಸ್ಪತ್ರೆಗೆ ಬಂದರೆ ಸಂಪೂರ್ಣ ಗುಣಮುಖರಾಗುವ ಸಾಧ್ಯತೆ ಇದೆ ಎಂದರು.

ಮಣಿಪಾಲ ಮಾಹೆ ಸಿಇಓ ಡಾ. ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ, ವಿಭಾಗ ಮುಖ್ಯಸ್ಥೆ ಡಾ. ಅಪರ್ಣಾ ಆರ್. ಪೈ, ನರಚಿಕಿತ್ಸಾ ವಿಭಾಗ ಮುಖ್ಯಸ್ಥ ಡಾ. ಗಿರೀಶ್ ಮೆನನ್ ಆರ್. ಇದ್ದರು. ಡಾ ಶ್ರೀಪದ್ಮ ವಿ. ನಿರೂಪಿಸಿದರು.

**Daijiworld**

# Udupi: Kasturba Hospital observes World Stroke Day by unveiling sand art

Sat, Oct 29 2022 06:56:39 PM

***Media Release***

**Udupi, Oct 29:** World Stroke Day is observed every year on October 29 to reduce the incidence of stroke across the world. World Stroke Day is an opportunity to raise awareness of the serious nature and high rates of stroke and talk about ways in which we can reduce the burden of stroke through better public awareness of the risk factors and signs of stroke.









As a part of this, Department of Neuro sciences at Kasturba Medical College and Hospital, Manipal has observed in a unique way by unveiling the stroke health awareness Sand Art Sculpture at Malpe Beach. Dr Sharath K Rao, dean, KMC Manipal unveiled the Sand sculpture and said, "A stroke is when blood clot happens in the brain, which results in inoperative of that particular part. 33 percent of people die from it and another 33 percent suffer permanent disability. A balanced diet and exercise play an important role in controlling this. If you reach the hospital with in 4.5 hours after seeing the symptoms of the stroke, the chances of complete recovery are high."

On this occasion Dr Anand Venugopal, chief operating officer, Teaching Hospital, MAHE, Manipal, Dr Avinash Shetty, medical superintendent Dr Aparna R Pai, head - department of Neurology and Dr Girish Menon R, head - department of Neuro Surgery and other staffs were present. Dr Aparna R Pai welcomed the gathering. Dr Girish Menon R gave an overview on stroke and Stroke Day and Dr Sripadma V was the master of ceremony for the programme.

# Kasturba Hospital Manipal observes World Stroke Day




**Manipal, Oct 29, 2022:** Department of Neuro Sciences, Kasturba Medical College and Hospital, Manipal observed World Stroke Day in a unique way by unveiling the stroke health awareness Sand Art Sculpture at Malpe Beach.

Dr Sharath K Rao, Dean, KMC Manipal unveiled the Sand sculpture.

***Also read:** Advanced Ophthalmic Microscope- Centurion Vision system with Active sentry Microphaco technology inaugurated at Kasturba Hospital*

"A stroke is when blood clot happens in the brain. About 33 percent of people die from it and another 33 percent suffer permanent disability. A balanced diet and exercise play an important role in controlling this," he said.

***Also read:** Raghupathi Bhat launches Manipal Arogya Card 2022*

"If you reach the hospital with in 4-5 hours, after seeing the symptoms of the stroke, the chances of complete recovery are high," he added.




Dr Anand Venugopal- Chief Operating Officer, Teaching Hospital, MAHE, Manipal, Dr Avinash Shetty, Medical Superintendent Dr Aparna R Pai, Head – Department of Neurology and Dr Girish Menon R Head- Department of Neuro Surgery and Other staffs were present.

***Also read:*** ***Paediatric Bone Marrow Transplantation at Kasturba Hospital- A rewarding journey***

Dr Aparna R Pai welcomed the gathering. Dr Girish Menon R gave an overview on Stroke and Stroke Day. Dr Sripadma V compered the program.




World Stroke Day is observed every year on October 29 to reduce the incidence of stroke across the world. World Stroke Day is an opportunity to raise awareness of the serious nature and high rates of stroke and talk about ways in which we can reduce the burden of stroke through better public awareness of the risk factors and signs of stroke.

**Hai Karavali:**

ಆರೋಗ್ಯ | ಉಡುಪಿ | ಕರಾವಳಿ

# ವಿಶ್ವ ಪಾರ್ಶ್ವವಾಯು ದಿನ: ಮಲ್ಪೆ ಬೀಚ್‌ನಲ್ಲಿ ಪಾರ್ಶ್ವವಾಯು ಆರೋಗ್ಯ ಕುರಿತು ಜಾಗೃತಿ ಮೂಡಿಸುವ ಮರಳು ಕಲಾ ಶಿಲ್ಪ ಅನಾವರಣ

1 month ago



Spread the love

ಮಣಿಪಾಲ, 29ನೇ ಅಕ್ಟೋಬರ್ 2022: ವಿಶ್ವದಾದ್ಯಂತ ಪಾರ್ಶ್ವವಾಯು ಸಂಭವವನ್ನು ಕಡಿಮೆ ಮಾಡಲು ಪ್ರತಿ ವರ್ಷ ಅಕ್ಟೋಬರ್ 29 ರಂದು ವಿಶ್ವ ಪಾರ್ಶ್ವವಾಯು ದಿನವನ್ನು ಆಚರಿಸಲಾಗುತ್ತದೆ. ವಿಶ್ವ ಪಾರ್ಶ್ವವಾಯು ದಿನವು ಇದರಿಂದಾಗುವ ಗಂಭೀರ ಸ್ವರೂಪ ಮತ್ತು ಪಾರ್ಶ್ವವಾಯುವಿನ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಪಾರ್ಶ್ವವಾಯುವಿನ ಅಪಾಯದ ಅಂಶಗಳು ಮತ್ತು ಚಿಹ್ನೆಗಳ ಬಗ್ಗೆ ಉತ್ತಮ ಸಾರ್ವಜನಿಕ ಅರಿವಿನ ಮೂಲಕ ನಾವು ಪಾರ್ಶ್ವವಾಯುವಿನ ಹೊರೆಯನ್ನು ಕಡಿಮೆ ಮಾಡುವ ವಿಧಾನಗಳ ಕುರಿತು ಮಾತನಾಡಲು ಉತ್ತಮ ಅವಕಾಶವನ್ನು ಕಲ್ಪಿಸಿದೆ.

ಇದರ ಅಂಗವಾಗಿ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ನರವಿಜ್ಞಾನ ವಿಭಾಗವು ಮಲ್ಪೆ ಕಡಲ ತೀರದಲ್ಲಿ ಪಾರ್ಶ್ವವಾಯು ಆರೋಗ್ಯದ ಕುರಿತು ಜಾಗೃತಿ ಮೂಡಿಸುವ ಮರಳು ಕಲಾ ಶಿಲ್ಪವನ್ನು ಅನಾವರಣಗೊಳಿಸುವ ಮೂಲಕ ವಿಶಿಷ್ಟ ರೀತಿಯಲ್ಲಿ ಆಚರಿಸಿತು. ಕೆಎಂಸಿ ಮಣಿಪಾಲದ ಡೀನ್ ಡಾ ಶರತ್ ಕೆ ರಾವ್ ಅವರು ಮರಳು ಕಲಾ ಶಿಲ್ಪವನ್ನು ಅನಾವರಣಗೊಳಿಸಿ ಮಾತನಾಡುತ್ತಾ, "ಪಾರ್ಶ್ವವಾಯು ಅಂದರೆ ಮೆದುಳಿನ ರಕ್ತನಾಳದಲ್ಲಿ ರಕ್ತ ಹೆಪ್ಪುಗಟ್ಟಿ ಆ ಭಾಗವು ನಿಷ್ಕ್ರಿಯಗೊಳ್ಳುತ್ತದೆ. ಇದರಿಂದ ಶೇಕಡಾ 33 ರಷ್ಟು ಜನ ಸಾವನ್ನಪ್ಪುತ್ತಾರೆ ಹಾಗು ಇನ್ನೂ ಶೇಕಡಾ 33 ರಷ್ಟು ಜನ ಶಾಶ್ವತ ಅಂಗನ್ಯೂನತೆ ಹೊಂದುತ್ತಾರೆ. ಇದನ್ನು ನಿಯಂತ್ರಿಸಲು ಸಮತೋಲನ ಆಹಾರ ಹಾಗು ವ್ಯಾಯಾಮವು ಅವಶ್ಯ."



ಈ ಸಾರ್ವಜನಿಕ ಜಾಗೃತಿ ಕಾರ್ಯಕ್ರಮದಲ್ಲಿ ತಿಳಿಸುವುದೇನೆಂದರೆ, ರೋಗಲಕ್ಷಣಗಳು ಕಂಡ 4.5 ಗಂಟೆಗಳ ಒಳಗೆ ಆಸ್ಪತ್ರೆಗೆ ಬಂದರೆ ಸಂಪೂರ್ಣ ಗುಣಮುಖರಾಗುವ ಸಾಧ್ಯತೆ ಹೆಚ್ಚಿದೆ.

ಈ ಸಂದರ್ಭದಲ್ಲಿ ಡಾ ಆನಂದ್ ವೇಣುಗೋಪಾಲ್- ಮುಖ್ಯ ನಿರ್ವಹಣಾಧಿಕಾರಿ, ಬೋಧನಾ ಆಸ್ಪತ್ರೆಗಳು, ಮಾಹೆ, ಮಣಿಪಾಲ, ಡಾ.ಅವಿನಾಶ್ ಶೆಟ್ಟಿ, ವೈದ್ಯಕೀಯ ಅಧೀಕ್ಷಕ, ಡಾ.ಅಪರ್ಣಾ ಆರ್.ಪೈ, ಮುಖ್ಯಸ್ಥರು, ನರವಿಜ್ಞಾನ ವಿಭಾಗ, ಡಾ.ಗಿರೀಶ್ ಮೆನನ್ ಆರ್, ಮುಖ್ಯಸ್ಥರು, ನರಶಸ್ತ್ರಚಿಕಿತ್ಸಾ ವಿಭಾಗ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು. ಡಾ ಅಪರ್ಣಾ ಆರ್ ಪೈ ಆರ್ ಸ್ವಾಗತಿಸಿದರು, ಡಾ ಗಿರೀಶ್ ಮೆನನ್ ಆರ್ ಅವರು ಪಾರ್ಶ್ವವಾಯು ಆರೋಗ್ಯ ಮತ್ತು ಪಾರ್ಶ್ವವಾಯು ದಿನದ ಕುರಿತು ಅವಲೋಕನವನ್ನು ನೀಡಿದರು ಮತ್ತು ಡಾ ಶ್ರೀಪದ್ಮ ವಿ ಕಾರ್ಯಕ್ರಮ ನಿರೂಪಿಸಿದರು.

# ಮಲ್ಪೆ: ವಿಶ್ವ ಪಾರ್ಶ್ವವಾಯು ದಿನದ ಅಂಗವಾಗಿ ಕಸ್ತೂರ್ಬಾ ಆಸ್ಪತ್ರೆ ವತಿಯಿಂದ ಮರಳು ಶಿಲ್ಪ ಕಲೆ ಅನಾವರಣ

October 30, 2022



ಮಲ್ಪೆ: ವಿಶ್ವದಾದ್ಯಂತ ಪಾರ್ಶ್ವವಾಯು ಸಂಭವವನ್ನು ಕಡಿಮೆ ಮಾಡಲು ಪ್ರತಿ ವರ್ಷ ಅಕ್ಟೋಬರ್ 29 ರಂದು ವಿಶ್ವ ಪಾರ್ಶ್ವವಾಯು ದಿನವನ್ನು ಆಚರಿಸಲಾಗುತ್ತದೆ. ಪಾರ್ಶ್ವವಾಯುವಿನಿಂದಾಗುವ ಗಂಭೀರ ಸ್ವರೂಪ, ಪಾರ್ಶ್ವವಾಯುವಿನ ಬಗ್ಗೆ ಜಾಗೃತಿ ಮೂಡಿಸಲು, ಪಾರ್ಶ್ವವಾಯುವಿನ ಅಪಾಯದ ಅಂಶಗಳು ಮತ್ತು ಚಿಹ್ನೆಗಳ ಬಗ್ಗೆ ಉತ್ತಮ ಸಾರ್ವಜನಿಕ ಅರಿವಿನ ಮೂಲಕ ಪಾರ್ಶ್ವವಾಯುವಿನ ಹೊರೆಯನ್ನು ಕಡಿಮೆ ಮಾಡುವ ವಿಧಾನಗಳ ಕುರಿತು ಮಾತನಾಡಲು ಉತ್ತಮ ಅವಕಾಶವನ್ನು ಈ ದಿನವು ಕಲ್ಪಿಸಿದೆ.

ಈ ದಿನದ ಅಂಗವಾಗಿ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ನರವಿಜ್ಞಾನ ವಿಭಾಗವು ಮಲ್ಪೆ ಕಡಲ ತೀರದಲ್ಲಿ ಪಾರ್ಶ್ವವಾಯು ಆರೋಗ್ಯದ ಕುರಿತು ಜಾಗೃತಿ ಮೂಡಿಸುವ ಮರಳು ಶಿಲ್ಪಕಲೆಯನ್ನು ಅನಾವರಣಗೊಳಿಸುವ ಮೂಲಕ ವಿಶಿಷ್ಟ ರೀತಿಯಲ್ಲಿ ಆಚರಿಸಿತು.

ಕೆಎಂಸಿ ಮಣಿಪಾಲದ ಡೀನ್ ಡಾ. ಶರತ್ ಕೆ ರಾವ್ ಅವರು ಮರಳು ಕಲಾ ಶಿಲ್ಪವನ್ನು ಅನಾವರಣಗೊಳಿಸಿ ಮಾತನಾಡಿ, ಪಾರ್ಶ್ವವಾಯು ಅಂದರೆ ಮೆದುಳಿನ ರಕ್ತನಾಳದಲ್ಲಿ ರಕ್ತ ಹೆಪ್ಪುಗಟ್ಟಿ ಆ ಭಾಗವು ನಿಷ್ಕ್ರಿಯಗೊಳ್ಳುತ್ತದೆ. ಇದರಿಂದ ಶೇಕಡಾ 33 ರಷ್ಟು ಜನ ಸಾವನ್ನಪ್ಪುತ್ತಾರೆ ಹಾಗು ಇನ್ನೂ ಶೇಕಡಾ 33 ರಷ್ಟು ಜನ ಶಾಶ್ವತ ಅಂಗನ್ಯೂನತೆ ಹೊಂದುತ್ತಾರೆ. ಇದನ್ನು ನಿಯಂತ್ರಿಸಲು ಸಮತೋಲನ ಆಹಾರ ಹಾಗೂ ವ್ಯಾಯಾಮ ಅವಶ್ಯ.

ರೋಗಲಕ್ಷಣಗಳು ಕಂಡ 4.5 ಗಂಟೆಗಳ ಒಳಗಾಗಿ ವ್ಯಕ್ತಿಯನ್ನು ಆಸ್ಪತ್ರೆ ದಾಖಲಿಸಿದರೆ ಸಂಪೂರ್ಣ ಗುಣಮುಖರಾಗುವ ಸಾಧ್ಯತೆ ಹೆಚ್ಚಿದೆ ಎಂದರು.

ಈ ಸಂದರ್ಭದಲ್ಲಿ ಮಾಹೆ ಮುಖ್ಯ ನಿರ್ವಹಣಾಧಿಕಾರಿ ಡಾ ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಹಾಗೂ ಆಸ್ಪತ್ರೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

ನರವಿಜ್ಞಾನ ವಿಭಾಗ ಮುಖ್ಯಸ್ಥೆ ಡಾ ಅಪರ್ಣಾ ಆರ್ ಪೈ ಸ್ವಾಗತಿಸಿದರು, ನರಶಸ್ತ್ರಚಿಕಿತ್ಸಾ ವಿಭಾಗ ಮುಖ್ಯಸ್ಥ ಡಾ ಗಿರೀಶ್ ಮೆನನ್ ಪಾರ್ಶ್ವವಾಯು ಆರೋಗ್ಯ ಮತ್ತು ಪಾರ್ಶ್ವವಾಯು ದಿನದ ಕುರಿತು ಅವಲೋಕನ ಮಾಡಿದರು. ಡಾ ಶ್ರೀಪದ್ಮ ವಿ ಕಾರ್ಯಕ್ರಮ ನಿರೂಪಿಸಿದರು.

ನ್ಯೂಸ್ ಪ್ರಾದೇಶಿಕ

# ಮಲ್ಪೆ- ಕಸ್ತೂರ್ಬಾ ಆಸ್ಪತ್ರೆ ವತಿಯಿಂದ ಪಾರ್ಶ್ವವಾಯು ಆರೋಗ್ಯ ಜಾಗೃತಿ

By **Udupi Bulletin News Desk** - October 30, 2022 0



**ಮಣಿಪಾಲ:** ವಿಶ್ವದಾದ್ಯಂತ ಪಾರ್ಶ್ವವಾಯು ಸಂಭವವನ್ನು ಕಡಿಮೆ ಮಾಡಲು ಪ್ರತಿ ವರ್ಷ ಅಕ್ಟೋಬರ್ 29 ರಂದು ವಿಶ್ವ ಪಾರ್ಶ್ವವಾಯು ದಿನವನ್ನು ಆಚರಿಸಲಾಗುತ್ತದೆ. ವಿಶ್ವ ಪಾರ್ಶ್ವವಾಯು ದಿನವು ಇದರಿಂದಾಗುವ ಗಂಭೀರ ಸ್ವರೂಪ ಮತ್ತು ಪಾರ್ಶ್ವವಾಯುವಿನ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಪಾರ್ಶ್ವವಾಯುವಿನ ಅಪಾಯದ ಅಂಶಗಳು ಮತ್ತು ಚಿಹ್ನೆಗಳ ಬಗ್ಗೆ ಉತ್ತಮ ಸಾರ್ವಜನಿಕ ಅರಿವಿನ ಮೂಲಕ ನಾವು ಪಾರ್ಶ್ವವಾಯುವಿನ ಹೊರೆಯನ್ನು ಕಡಿಮೆ ಮಾಡುವ ವಿಧಾನಗಳ ಕುರಿತು ಮಾತನಾಡಲು ಉತ್ತಮ ಅವಕಾಶವನ್ನು ಕಲ್ಪಿಸಿದೆ.

ಇದರ ಅಂಗವಾಗಿ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ನರವಿಜ್ಞಾನ ವಿಭಾಗವು ಮಲ್ಪೆ ಕಡಲ ತೀರದಲ್ಲಿ ಪಾರ್ಶ್ವವಾಯು ಆರೋಗ್ಯದ ಕುರಿತು ಜಾಗೃತಿ ಮೂಡಿಸುವ ಮರಳು ಕಲಾ ಶಿಲ್ಪವನ್ನು ಅನಾವರಣಗೊಳಿಸುವ ಮೂಲಕ ವಿಶಿಷ್ಟ ರೀತಿಯಲ್ಲಿ ಆಚರಿಸಿತು.

ಕೆಎಂಸಿ ಮಣಿಪಾಲದ ಡೀನ್ ಡಾ. ಶರತ್ ಕೆ ರಾವ್ ಅವರು ಮರಳು ಕಲಾ ಶಿಲ್ಪವನ್ನು ಅನಾವರಣಗೊಳಿಸಿ ಮಾತನಾಡುತ್ತಾ, ಪಾರ್ಶ್ವವಾಯು ಅಂದರೆ ಮೆದುಳಿನ ರಕ್ತನಾಳದಲ್ಲಿ ರಕ್ತ ಹೆಪ್ಪುಗಟ್ಟಿ ಆ ಭಾಗವು ನಿಷ್ಕ್ರಿಯಗೊಳ್ಳುತ್ತದೆ. ಇದರಿಂದ ಶೇಕಡಾ 33 ರಷ್ಟು ಜನ ಸಾವನ್ನಪ್ಪುತ್ತಾರೆ ಹಾಗು ಇನ್ನೂ ಶೇಕಡಾ 33 ರಷ್ಟು ಜನ ಶಾಶ್ವತ ಅಂಗನ್ಯೂನತೆ ಹೊಂದುತ್ತಾರೆ. ಇದನ್ನು ನಿಯಂತ್ರಿಸಲು ಸಮತೋಲನ ಆಹಾರ ಹಾಗು ವ್ಯಾಯಾಮವು ಸಹಕಾರಿ ಎಂದರು.

ಈ ಸಾರ್ವಜನಿಕ ಜಾಗೃತಿ ಕಾರ್ಯಕ್ರಮದಲ್ಲಿ ತಿಳಿಸುವುದೇನೆಂದರೆ, ರೋಗಲಕ್ಷಣಗಳು ಕಂಡ 4.5 ಗಂಟೆಗಳ ಒಳಗೆ ಆಸ್ಪತ್ರೆಗೆ ಬಂದರೆ ಸಂಪೂರ್ಣ ಗುಣಮುಖರಾಗುವ ಸಾಧ್ಯತೆ ಹೆಚ್ಚಿದೆ.

ಮಾಹೆ ಮಣಿಪಾಲ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ. ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

ನರವಿಜ್ಞಾನ ವಿಭಾಗ ಮುಖ್ಯಸ್ಥರಾದ ಡಾ. ಅಪರ್ಣಾ ಆರ್ ಪೈ ಸ್ವಾಗತಿಸಿ, ನರಶಸ್ತ್ರಚಿಕಿತ್ಸಾ ವಿಭಾಗ ಮುಖ್ಯಸ್ಥರಾದ ಡಾ. ಗಿರೀಶ್ ಮೆನನ್ ಆರ್ ಅವರು ಪಾರ್ಶ್ವವಾಯು ಆರೋಗ್ಯ ಮತ್ತು ಪಾರ್ಶ್ವವಾಯು ದಿನದ ಕುರಿತು ಅವಲೋಕನವನ್ನು ನೀಡಿದರು. ಡಾ. ಶ್ರೀಪದ್ಮ ವಿ ಕಾರ್ಯಕ್ರಮ ನಿರೂಪಿಸಿದರು.

V4 NEWS KARNATAKA

# ವಿಶ್ವ ಪಾರ್ಶ್ವವಾಯು ದಿನದ ಪ್ರಯುಕ್ತ ಜಾಗೃತಿ: ಮಲ್ಪೆಯಲ್ಲಿ ಮರಳು ಕಲಾ ಶಿಲ್ಪ ಅನಾವರಣ

October 30, 2022 98 No Comment




ವಿಶ್ವದಾದ್ಯಂತ ಪಾರ್ಶ್ವವಾಯು ಸಂಭವವನ್ನು ಕಡಿಮೆ ಮಾಡಲು ಪ್ರತಿ ವರ್ಷ ಅಕ್ಟೋಬರ್ 29 ರಂದು ವಿಶ್ವ ಪಾರ್ಶ್ವವಾಯು ದಿನವನ್ನು ಆಚರಿಸಲಾಗುತ್ತದೆ. ಇದರ ಅಂಗವಾಗಿ ಮಣಿಪಾಲದ ಕಸ್ತೂರ್ಬಾ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ನರವಿಜ್ಞಾನ ವಿಭಾಗವು ಮಲ್ಪೆ ಕಡಲ ತೀರದಲ್ಲಿ ಪಾರ್ಶ್ವವಾಯು ಆರೋಗ್ಯದ ಕುರಿತು ಜಾಗೃತಿ ಮೂಡಿಸುವ ಮರಳು ಕಲಾ ಶಿಲ್ಪವನ್ನು ಅನಾವರಣಗೊಳಿಸುವ ಮೂಲಕ ವಿಶಿಷ್ಟ ರೀತಿಯಲ್ಲಿ ಆಚರಿಸಿತು. ಕೆಎಂಸಿ ಮಣಿಪಾಲದ ಡೀನ್ ಡಾ ಶರತ್ ಕೆ ರಾವ್ ಅವರು ಮರಳು ಕಲಾ ಶಿಲ್ಪವನ್ನು ಅನಾವರಣಗೊಳಿಸಿ ಮಾತನಾಡುತ್ತಾ, “ಪಾರ್ಶ್ವವಾಯು ಅಂದರೆ ಮೆದುಳಿನ ರಕ್ತನಾಳದಲ್ಲಿ ರಕ್ತ ಹೆಪ್ಪುಗಟ್ಟಿ ಆ ಭಾಗವು ನಿಷ್ಕ್ರಿಯಗೊಳ್ಳುತ್ತದೆ. ಇದರಿಂದ ಶೇಕಡಾ 33 ರಷ್ಟು ಜನ ಸಾವನ್ನಪ್ಪುತ್ತಾರೆ ಹಾಗು ಇನ್ನೂ ಶೇಕಡಾ 33 ರಷ್ಟು ಜನ ಶಾಶ್ವತ ಅಂಗನ್ಯೂನತೆ ಹೊಂದುತ್ತಾರೆ. ಇದನ್ನು ನಿಯಂತ್ರಿಸಲು ಸಮತೋಲನ ಆಹಾರ ಹಾಗು ವ್ಯಾಯಾಮವು ಅವಶ್ಯ.”

ಈ ಸಾರ್ವಜನಿಕ ಜಾಗೃತಿ ಕಾರ್ಯಕ್ರಮದ ಮೂಲಕ ರೋಗಲಕ್ಷಣಗಳು ಕಂಡ 4.5 ಗಂಟೆಗಳ ಒಳಗೆ ಆಸ್ಪತ್ರೆಗೆ ಬಂದರೆ ಸಂಪೂರ್ಣ ಗುಣಮುಖರಾಗುವ ಸಾಧ್ಯತೆ ಹೆಚ್ಚಿದೆ ಎಂಬ ಅರಿವನ್ನು ಮೂಡಿಸುವ ಉದ್ದೇಶವಾಗಿದೆ. ವಿಶ್ವ ಪಾರ್ಶ್ವವಾಯು ದಿನವು, ಇದರಿಂದಾಗುವ ಗಂಭೀರ ಸ್ವರೂಪ ಮತ್ತು ಪಾರ್ಶ್ವವಾಯುವಿನ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಪಾರ್ಶ್ವವಾಯುವಿನ ಅಪಾಯದ ಅಂಶಗಳು ಮತ್ತು ಚಿಹ್ನೆಗಳ ಬಗ್ಗೆ ಉತ್ತಮ ಸಾರ್ವಜನಿಕ ಅರಿವಿನ ಮೂಲಕ ಪಾರ್ಶ್ವವಾಯುವಿನ ಹೊರೆಯನ್ನು ಕಡಿಮೆ ಮಾಡುವ ವಿಧಾನಗಳ ಕುರಿತು ಮಾತನಾಡಲು ಉತ್ತಮ ಅವಕಾಶವನ್ನು ಕಲ್ಪಿಸಿದ ಅದ್ಭುತ ಕಾರ್ಯಕ್ರಮ ಇದಾಗಿದೆ.

ಈ ಸಂದರ್ಭದಲ್ಲಿ ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳು ಇದರ ಮುಖ್ಯ ನಿರ್ವಹಣಾಧಿಕಾರಿಯಾದ ಡಾ. ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕರಾದ ಡಾ. ಅವಿನಾಶ್ ಶೆಟ್ಟಿ, ನರವಿಜ್ಞಾನ ವಿಭಾಗದ ಮುಖ್ಯಸ್ಥರಾದ ಡಾ. ಅಪರ್ಣಾ ಆರ್. ಪೈ, ನರಶಾಸ್ತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ. ಗಿರೀಶ್ ಮೆನನ್ ಆರ್ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು. ಡಾ. ಅಪರ್ಣಾ ಆರ್ ಪೈ ಆರ್ ಸ್ವಾಗತಿಸಿದರು, ಡಾ. ಗಿರೀಶ್ ಮೆನನ್ ಆರ್ ಅವರು ಪಾರ್ಶ್ವವಾಯು ಆರೋಗ್ಯ ಮತ್ತು ಪಾರ್ಶ್ವವಾಯು ದಿನದ ಕುರಿತು ಅವಲೋಕನವನ್ನು ನೀಡಿದರು ಮತ್ತು ಡಾ. ಶ್ರೀಪದ್ಮ ವಿ ಕಾರ್ಯಕ್ರಮ ನಿರೂಪಿಸಿದರು.

**Other Links:**

- Public Next: https://publicnext.com/article/nid/Udupi/Mangalore/Health-and-Fitness/?lang=kn&node=730791